# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 991 |
| ಮಾನ್ಯ ಸದಸ್ಯರ ಹೆಸರು | ಶ್ರೀ ಡಾ. ತಳವಾರ್ ಸಾಬಣ್ಣ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 24.02.2023 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದ ಕುಂಬಾರ ಸಮುದಾಯದವರು ಪ್ರತ್ಯೇಕ ಕುಂಬಾರರ ಅಭಿವೃದ್ಧಿ ನಿಗಮ ರಚಿಸಬೇಕೆಂದು ಹೋರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ತೀರಾ ಹಿಂದುಳಿದ ಕುಂಬಾರ ಸಮಾಜ ರಾಜ್ಯದಲ್ಲಿ ಬಹಳಷ್ಟು ದಿನಗಳಿಂದ ಕಡೆಗಣಿಸಲ್ಪಟ್ಟಿದ್ದು, ಅವರಿಗಾಗಿ ಪ್ರತ್ಯೇಕ ನಿಗಮ ಸ್ಥಾಪಿಸಿ ಬಡ ಸಮುದಾಯದ ಅಭಿವೃದ್ಧಿಗೆ ಕ್ರಮ ವಹಿಸಲಾಗುವುದೇ : | ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000, ದಿನಾಂಕ:30.03.2002ರ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯ ಪ್ರವರ್ಗ-2ಎ ಕ್ರ.ಸಂ.06 ರಲ್ಲಿ ಕುಂಬಾರ ಹಾಗೂ ಅದರ ಸಮಾನಾಂತರ ಜಾತಿಗಳನ್ನು ಸೇರ್ಪಡೆ ಮಾಡಿ ಶೇ. 15ರಷ್ಟು ಶೈಕ್ಷಣಿಕ ಹಾಗೂ ಔದ್ಯೋಗಿಕ ಮೀಸಲಾತಿಯನ್ನು ಕಲ್ಪಿಸಲಾಗಿರುತ್ತದೆ.<br><br>ಕುಂಬಾರ ಸಮುದಾಯದ ಫಲಾನುಭವಿಗಳಿಗೆ ಕುಂಭಕಲಾ ಅಭಿವೃದ್ಧಿ ಮಂಡಳಿಯಿಂದ ಸಾಲ ಸೌಲಭ್ಯವನ್ನು ಒದಗಿಸಲಾಗಿರುತ್ತದೆ. ಮುಂದುವರೆದು ಕುಂಬಾರ ಹಾಗೂ ಅದರ ಸಮಾನಾಂತರ ಸಮುದಾಯಗಳು ಸೇರಿದಂತೆ ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿಗೆ ಸೇರಿದ ಸಮುದಾಯದವರಿಗೆ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ ಹಾಗೂ ತರಬೇತಿ ಯೋಜನೆ ಗಳಲ್ಲಿ ಸೌಲಭ್ಯಗಳನ್ನು ಒದಗಿಸ ಲಾಗುತ್ತಿರುತ್ತದೆ. ಕುಂಬಾರ ಸಮುದಾಯ ದವರಿಗೆ ಪ್ರತ್ಯೇಕ ಅಭಿವೃದ್ಧಿ ನಿಗಮವನ್ನು ಸ್ಥಾಪಿಸುವ ಬೇಡಿಕೆಯನ್ನು ಪರಿಶೀಲಿಸಲಾಗುತ್ತದೆ. |
| ಇ) | ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅಡಿಯಲ್ಲಿ ಕುಂಭಕಲಾ ಅಭಿವೃದ್ಧಿ ಮಂಡಳಿ ಸ್ಥಾಪಿತ | ಕುಂಭಕಲಾ ಅಭಿವೃದ್ಧಿ ಮಂಡಳಿಯಿಂದ ಕುಂಬಾರ ಸಮುದಾಯಕ್ಕೆ 2010-11ನೇ ಸಾಲಿನಿಂದ 2019-20ನೇ ಸಾಲಿನ ವರೆಗೆ 13649 ಫಲಾನುಭವಿಗಳಿಗೆ ರೂ.5905.00 ಲಕ್ಷಗಳ ಸಾಲ ಸೌಲಭ್ಯವನ್ನು |

| | | |
|---|---|---|
| | ವಾಗಿದ್ದು, ಅದರಿಂದ ಕುಂಬಾರ ಸಮುದಾಯಕ್ಕೆ ಯಾವುದೇ ರೀತಿಯ ಪ್ರಯೋಜನ ವಾಗದಿರುವುದು ನಿಜವೇ; | ಒದಗಿಸಲಾಗಿರುತ್ತದೆ. 2020-21ನೇ ಸಾಲಿನಿಂದ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಕ್ಕೆ ಒಟ್ಟಾರೆ ಒದಗಿಸಿದ ಅನುದಾನದಲ್ಲಿ ಕುಂಬಾರ ಜನಾಂಗವು ಸೇರಿದಂತೆ ಪ್ರವರ್ಗ-1, ಪ್ರವರ್ಗ-2ಎ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿಗೆ ಸೇರಿದವರಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ, ಗಂಗಾಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ ಹಾಗೂ ತರಬೇತಿ ಯೋಜನೆಗಳಲ್ಲಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |
| ಈ) | ಸರ್ಕಾರ ಕುಂಬಾರರ ಅಭಿವೃದ್ಧಿ ನಿಗಮ ಸ್ಥಾಪಿಸಿ ಹಾಗೂ ಅದಕ್ಕೆ ಬೇಕಾದ ಹಣಕಾಸಿನ ಸೌಲಭ್ಯ ಒದಗಿಸಿ ಕುಂಬಾರ ಸಮುದಾಯದವರ ಬಹುದಿನಗಳ ಬೇಡಿಕೆಯನ್ನು ಈಡೇರಿಸಲು ಕ್ರಮತೆಗೆದುಕೊಳ್ಳುವುದೇ | ಕುಂಬಾರ ಸಮುದಾಯ ದವರಿಗೆ ಪ್ರತ್ಯೇಕ ಅಭಿವೃದ್ಧಿ ನಿಗಮವನ್ನು ಸ್ಥಾಪಿಸುವ ಬೇಡಿಕೆಯನ್ನು ಪರಿಶೀಲಿಸಲಾಗುತ್ತದೆ. |

ಸಂಖ್ಯೆ: ಹಿಂವಕ 83 ಬಿಸಿಎ 2023

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು